# ಸಾಕ್ಷರತಾ ದಿನ ಆಚರಣೆ

ಬೆಂಗಳೂರು: ಸಾಮಾಜಿಕ ಮತ್ತು ಸಮುದಾಯದ ಅಭಿವೃದ್ಧಿಗೆ ಸಾಕ್ಷರತೆಯ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು ಸಿಎಂಆರ್ ವಿಶ್ವವಿದ್ಯಾಲಯದ ಸ್ಕೂಲ್ ಆಫ್ ಲೀಗಲ್ ಸ್ಟಡೀಸ್ ವತಿಯಿಂದ ಬುಧವಾರ ಅಂತಾರಾಷ್ಟ್ರೀಯ ಸಾಕ್ಷರತಾ ದಿನವನ್ನು ಆಚರಿಸಲಾಯಿತು. ವ್ಯಕ್ತಿ ಮತ್ತು ಸಮುದಾಯ ಗಳನ್ನು ಸಬಲಗೊಳಿಸುವ ಸಾಧನವಾಗಿ ಸಾಕ್ಷರತೆಯು ಕಾರ್ಯನಿರ್ವಹಿಸುತ್ತದೆ. ಆನ್‌ಲೈನ್ ಮೂಲಕ ಮನೆ ಮನೆಗೆ ಥೀಮ್ ತಲುಪಿಸುವ ಅನೇಕ ಕ್ರಿಯಾಶೀಲ ಚಟುವಟಿಕೆಗಳನ್ನು ಸ್ಕೂಲ್ ಆಫ್ ಲೀಗಲ್ ಸ್ಟಡೀಸ್ ವಿದ್ಯಾರ್ಥಿಗಳು ಕೈಗೆತ್ತಿಕೊಂಡರು. ಪ್ರಸ್ತುತ ಸಂದರ್ಭದಲ್ಲಿ ಕಲಿಕೆಗೆ ಡಿಜಿಟಲ್ ಪ್ಲಾಟ್‌ಫಾರ್ಮ್ ಅತ್ಯಂತ ಮಹತ್ವದ್ದಾಗಿರುವುದರಿಂದ ಡಿಜಿಟಲ್ ಸಾಕ್ಷರತೆಯ ಅಂತರ ಕಡಿಮೆ ಮಾಡಲು ಡಿಜಿಟಲ್ ಮಾಧ್ಯಮವನ್ನು ಹೇಗೆ ಬಳಸಬಹುದು ಎಂಬುದರ ಕುರಿತು ವಿದ್ಯಾರ್ಥಿಗಳು ಚರ್ಚಿಸಿದರು. ಕೊರೊನಾ ಸಾಂಕ್ರಾಮಿಕ ಸಂಕಷ್ಟದ ಸಂದರ್ಭದಲ್ಲಿ ಶಿಕ್ಷಣವು ಮಾನವೀಯ ಮೌಲ್ಯ ಗಳನ್ನು ಕಲಿಸಲು ಹೇಗೆ ಸಹಾಯ ಮಾಡುತ್ತದೆ ಎಂಬುದನ್ನು ತೋರಿಸಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.